ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಅ/ಬ್ಯಾ.ವಿ/ತಾಂ.ಮ/ 78 /2015-16

ಕಾರ್ಯಪಾಲಕ ಅಭಿಯಂತರವರ ಕಛೇರಿ
ಬ್ಯಾಟರಾಯನಪುರ, ಬೃ.ಬೆಂ.ಮ.ಪಾ.
ಬೆಂಗಳೂರು-92
ದಿನಾಂಕ: 16.06.2015

ಮಾರ್ಪಾಡಿತ ತಾಂತ್ರಿಕ ಮಂಜೂರಾತಿ

ವಿಷಯ:- Providing Fencing in Sanjeevininagara Gundanjaneya temple Opp. Govt Land in ward no. 07, Kodigehalli sub division.

ಉಲ್ಲೇಖ:1. ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ: 007-15-000030

2. **ಆಡಳಿತಾತ್ಮಕ ಮಂಜೂರಾತಿ** ಸಂಖ್ಯೆ:ಬೃ.ಬೆಂ.ಮ.ಪಾ/ಅ.ಆ/ಯ.ವ/ಆ.ಅ/45/2014-15 ದಿ: 29.10.2014.

3. ಈ ಹಿಂದೆ ನೀಡಲಾಗಿರುವ ತಾಂತ್ರಿಕ ಮಂಜೂರಾತಿ ಸಂಖ್ಯೆ: ಬೃ.ಬೆಂ.ಮ.ಪಾ/ ಕಾ.ಅ/ಯ.ವ/ತಾಂ.ಮ/123/2014-15 ದಿ:29.10.2014 ರದ್ದುಪಡಿಸಿದೆ.

4. ಸದರಿ ಉಪ ಅಂದಾಜು ಪಟ್ಟಿಗೆ ಕಡತದ ಕಂಡಿಕೆ(17)ರಲ್ಲಿ ಮುಖ್ಯ ಅಭಿಯಂತರರು(ಯಲಹಂಕ ವಲಯ)ರವರು ಅನುಮೋದನೆ ನೀಡಿರುತ್ತಾರೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೊಡಿಗೇಹಳ್ಳಿ ಉಪ ವಿಭಾಗ) ರವರು **2014-15**ನೇ ಸಾಲಿನ **ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್** ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಪಿ-1771, ಅನುದಾನದಡಿಯಲ್ಲಿ ಮೇಲ್ಕಂಡ ಕಾಮಗಾರಿಗೆ ಉಲ್ಲೇಖ(3)ರಂತೆ ತಾಂತ್ರಿಕ ಮಂಜೂರಾತಿಯನ್ನು ರೂ. 10.00 ಲಕ್ಷಗಳಿಗೆ ನೀಡಲಾಗಿದ್ದು ಸದರಿ ಅಂದಾಜು ಪಟ್ಟಿಯನ್ನು 2014-15ನೇ ಸಾಲಿನ ದರಪಟ್ಟಿಯಂತೆ ಮಾರ್ಪಾಡಿಸಲಾಗಿದ್ದು, ಈ ಹಿಂದೆ ನೀಡಲಾಗಿರುವ ತಾಂತ್ರಿಕ ಮಂಜೂರಾತಿಯನ್ನು ರದ್ದುಗೊಳಿಸಲಾಗಿರುತ್ತದೆ.

ಸದರಿ ಅಂದಾಜು ಪಟ್ಟಿಯಲ್ಲಿ ಕೆಲವು ಅಂಶಗಳಿಗೆ 2014-15ನೇ ಸಾಲಿನ **ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್** ದರಪಟ್ಟಿಯನ್ವಯ ಅಂದಾಜು ಪಟ್ಟಿಯನ್ನು ಸ್ಥಳ ಬದಲಾವಣೆ ಮಾಡಲಾಗಿದ್ದು, ರೂ. 10.00 ಲಕ್ಷಗಳಿಗೆ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ.

ಉಲ್ಲೇಖ (1) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (2) ರಂತೆ ಜಂಟಿ ಆಯುಕ್ತರು ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2014ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 12 ಕ್ರ.ಸಂ 78 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register)ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ
ಬಿ.ಬಿ.ಎಂ.ಪಿ, ಬೆಂಗಳೂರು-92.

ಪ್ರತಿಯನ್ನು:

1. ಮಾನ್ಯ ಅಪರ ಆಯುಕ್ತರು, ಬಿ.ಬಿ.ಎಂ.ಪಿ ಯಲಹಂಕ ವಲಯರವರ ಮಾಹಿತಿಗಾಗಿ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.